## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ. **1516/2022**

ಚಾಸಾ-4 ಪ್ರಾಸಾ-5

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 07-02-2026

| | | |
|---|---|---|
| ಹೆಸರು | : | ಜಮೀಲಾ |
| ಗಂಡನ ಹೆಸರು | : | ಬಾವಸಾಬ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಗೌಡಗಾವ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ಚಾಸಾ 1 ರವರು ಪರಿಚಯ ಇರುತ್ತಾರೆ.

ನಾನು ಒಂದು ದಿನ ನಮ್ಮ ಮನೆ ಮುಂದೆ ಕಟ್ಟೆ ಮೇಲೆ ಕುಳಿತಿದ್ದೆ ಆಗ 1 ನೇ ಆರೋಪಿ ಮತ್ತು ಚಾಸಾ 1 ರವರು ಅವಾಚ್ಯ ಶಬ್ದಗಳಿಂದ ಬೈಯ್ಯುತಾ ಜಗಳವಾಡುತ್ತಿದ್ದರು. ನಾನು ಅಷ್ಟೆ ನೋಡಿರುತ್ತೇನೆ. ನನ್ನ ಕಾಲು ಸರಿಯಿರುವುದಿಲ್ಲ, ನಾನು ಬಿಡಿಸಲು ಹೋಗಿರುವುದಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸ.ಸ.ಅ. ರವರಿಂದ

ಈಗ ಸುಮಾರು 4-5 ವರ್ಷಗಳ ಹಿಂದೆ ಜಗಳವಾಡುತ್ತಿದ್ದಾಗ 2 ನೇ ಆರೋಪಿಯು ಚಾಸಾ 1 ರವರಿಗೆ ಬೈಯ್ಯುತ್ತಿದ್ದರು ಎಂದರೆ ಸಾಕ್ಷಿ ನಾನು ನೋಡಿಲ್ಲ ಎಂದು ನುಡಿಯುತ್ತಾರೆ. ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿತಳನ್ನು ನೋಡಿ ಸಾಕ್ಷಿ ಗುರುತಿಸುತ್ತಾರೆ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RMS** ವಕೀಲರಿಂದ **:-**</u>

ಆರೋಪಿತಳು ಮತ್ತು ಚಾಸಾ 1 ರವರು ಜಗಳ ಆಡುವುದು ಕೇಳಿಸಿರುತ್ತದೆ ಅಷ್ಟೆ ಎಂದರೆ ಸರಿ. ಈ ಪ್ರಕರಣ ಕುರಿತು ಇದೇ ಮೊದಲ ಬಾರಿಗೆ ಹೇಳಿಕೆ ನೀಡುತ್ತಿದ್ದೇನೆ ಎಂದರೆ ಸರಿ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ